# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 780 |
| ಸದಸ್ಯರ ಹೆಸರು: | : | ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | : | 18.08.2025 |
| ಉತ್ತರಿಸುವ ಸಚಿವರು: | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

*****

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಾರ್ವಜನಿಕರಿಗೆ ಅಗ್ಗದ ದರದಲ್ಲಿ ಔಷಧಿಗಳು ಲಭ್ಯವಾಗುವ ಉದ್ದೇಶದಿಂದ ಸ್ಥಾಪಿಸಲಾಗಿದ್ದ ಜನಔಷಧಿ ಕೇಂದ್ರಗಳನ್ನು ರಾಜ್ಯ ಸರ್ಕಾರವು ಸ್ಥಗಿತಗೊಳಿಸಲು ಕಾರಣಗಳೇನು; ಈ ನಿರ್ಧಾರದಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರಿ ಆಸ್ಪತ್ರೆಗೆ ಬರುವ ರೋಗಿಗಳಿಗೆ ಯಾವುದೇ ಔಷಧಿಗಳನ್ನು ಖರೀದಿಸಲು ಶಿಫಾರಸ್ಸನ್ನು ಮಾಡದಂತೆ ನೋಡಿಕೊಳ್ಳುವುದು ಸರ್ಕಾರದ ಉದ್ದೇಶವಾಗಿದೆ. ಇದರಿಂದ ಸರ್ಕಾರಿ ಆಸ್ಪತ್ರೆಗಳಲ್ಲಿ ಬಡ ರೋಗಿಗಳಿಗೆ ಉಪಯೋಗವಾಗುತ್ತಿದೆ.<br><br>ಈ ಹಿನ್ನೆಲೆಯಲ್ಲಿ ಸರ್ಕಾರಿ ಆಸ್ಪತ್ರೆ ಆವರಣದೊಳಗೆ ಜನೌಷಧಿ ಕೇಂದ್ರಗಳನ್ನು ತೆರೆಯುವುದು ಸರ್ಕಾರದ ನೀತಿಗೆ ವ್ಯತಿರಿಕ್ತವಾಗಿದ್ದು, ಸರ್ಕಾರದ ಅದೇಶ ಸಂಖ್ಯೆ ಅಕುಕ 173 ಪಿಟಿಡಿ 2025, ಬೆಂಗಳೂರು, ದಿನಾಂಕ 14.05.2025 ರಲ್ಲಿ (ಲಗತ್ತಿಸಿದೆ) ತಿಳಿಸಿರುವಂತೆ ಸರ್ಕಾರಿ ಆಸ್ಪತ್ರೆ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಜನೌಷದಿ ಕೇಂದ್ರಗಳನ್ನು ಅವರೊಂದಿಗೆ ಮಾಡಿಕೊಂಡಿರುವ ಒಪ್ಪಂದ ನಿಯಮಗಳ (MOU) ಪ್ರಕಾರ ಸ್ಥಗಿತಗೊಳಿಸಲು ಆದೇಶವಾಗಿದೆ.<br><br>ಸರ್ಕಾರಿ ಆಸ್ಪತ್ರೆಗಳ ಹೊರಗೆ ಸ್ಥಾಪನೆಯಾಗಿರುವ ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸಲು ಯಾವುದೇ ಆದೇಶವಾಗಿರುವುದಿಲ್ಲ. ಸಾರ್ವಜನಿಕರು ಸರ್ಕಾರಿ ಆಸ್ಪತ್ರೆ ಆವರಣದ ಹೊರಗಿರುವ ಜನಔಷಧಿ ಕೇಂದ್ರಗಳನ್ನು ಬಳಸಿಕೊಳ್ಳಬಹುದಾಗಿದೆ. |
| ಆ) | ಈ ನಿರ್ಧಾರವನ್ನು ಪುನರ್ ಪರಿಶೀಲನೆ ಮಾಡುವ ಯೋಚನೆ ಸರ್ಕಾರದ ಮುಂದಿದೆಯೇ | ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಇ) | 'ಜನಔಷಧಿ ಕೇಂದ್ರಗಳನ್ನು ಪುನರ್ ಪ್ರಾರಂಭಿಸುವ ಕುರಿತು ಸರ್ಕಾರದ ಯೋಜನೆಯೇನು? | |

ಸಂಖ್ಯೆ: ಆಕುಕ 304 ಪಿಟಿಡಿ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

E-1607749416
16/5/25

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಜನೌಷಧಿ ಕೇಂದ್ರಗಳನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಆಕುಕ 161 ಹೆಚ್ ಪಿಸಿ 2016, ದಿನಾಂಕ:29.09.2016.
2. ಸರ್ಕಾರದ ಆದೇಶ ಸಂಖ್ಯೆ: ಆಕುಕ 164 ಹೆಚ್‌ಪಿಸಿ 2016, ದಿನಾಂಕ:01.10.2016.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಏಕಕಡತ ಸಂಖ್ಯೆ: HFWS-17014/148/2023.

ಆರೋಗ್ಯ ಮತ್ತು ... ನಿರ್ದೇಶಕರ ಕಚೇರಿ "ಆರೋಗ್ಯ ಸೌಧ", ಬೆಂಗಳೂರು-23.
ದಿನಾಂಕ: 17/05/25
ಸಂಖ್ಯೆ: 289

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ(1) ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಆಸ್ಪತ್ರೆ, ಹಾಗೂ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಸುಮಾರು 200 ಜನೌಷಧಿ ಮಳಿಗೆಗಳನ್ನು ಸ್ಥಾಪಿಸಲು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ. (2) ರಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿನ ವೈದ್ಯರುಗಳು ಬ್ರ್ಯಾಂಡೆಡ್ ಔಷಧಿಗಳನ್ನು ರೋಗಿಗಳಿಗೆ ಸಲಹಾ ಚೀಟಿ (Prescription) ರೂಪದಲ್ಲಿ ನೀಡುವುದನ್ನು ನಿಷೇಧಿಸಲಾಗಿದೆ ಹಾಗೂ ಆರೋಗ್ಯ ಸಂಸ್ಥೆಗಳಲ್ಲಿ ಲಭ್ಯವಿರದ ಔಷಧಿಗಳನ್ನು ಸಂಬಂಧಿಸಿದ ವೈದ್ಯರುಗಳು, ರೋಗಿಗಳಿಗೆ ನೀಡುವ ಸಲಹಾ ಚೀಟಿ (Prescription) ಗಳನ್ನು Generic ಹೆಸರಿನಲ್ಲಿ ಬರೆಯಲು ಕಡ್ಡಾಯವಾಗಿ ಸೂಚಿಸಿದೆ. ಈ ಔಷಧಿಗಳನ್ನು ಆರೋಗ್ಯ ಸಂಸ್ಥೆಯ ಆವರಣದಲ್ಲಿ ಸ್ಥಾಪಿಸಿರುವ ಜನೌಷಧಿ ಮಳಿಗೆಯಲ್ಲಿ ಕಡಿಮೆ ದರದಲ್ಲಿ ಔಷಧಿ ಸಿಗುವ ಬಗ್ಗೆ ರೋಗಿಗಳಿಗೆ ವಿವರಿಸಿ ಅಲ್ಲಿಂದ ಆ ಔಷಧಿಗಳನ್ನು ಖರೀದಿಸಲು ಸಲಹೆ ನೀಡುವಂತೆ ಸಹ ಸೂಚಿಸಿದೆ ಹಾಗೂ ಜನರಿಕ್ ಔಷಧಿಗಳು, ಬ್ರ್ಯಾಂಡೆಡ್ ಔಷಧಿಯಷ್ಟೇ ಉತ್ತಮ ಗುಣಮಟ್ಟ, ರೋಗನಿವಾರಕ ಸಾಮರ್ಥ್ಯ ಹೊಂದಿರುತ್ತದೆ ಎಂದು ರೋಗಿಗಳಿಗೆ ಶಿಕ್ಷಣ ಹಾಗೂ ಪ್ರಚಾರದ ಮೂಲಕ ಜಾಗೃತಿ ಮೂಡಿಸುವುದು ಮತ್ತು ಜನರಿಕ್ ಔಷಧಿಗಳನ್ನು ಈ ಒಂದು ಸದುದ್ದೇಶಕ್ಕಾಗಿ ತೆರೆದಿರುವ ಜನೌಷಧಿ ಮಳಿಗೆಗಳ ಮೂಲಕವೇ ಖರೀದಿಸಲು ಜನಸಾಮಾನ್ಯರಿಗೆ ಉತ್ತೇಜನದ ಮುಖಾಂತರ ತಿಳುವಳಿಕೆ ನೀಡಲು ಆದೇಶಿಸಿದೆ.

ಮೇಲೆ ಓದಲಾದ ಕ್ರ.ಸಂ (3)ರ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಏಕಕಡತದಲ್ಲಿ ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪ್ರಸ್ತುತ 207 ಜನೌಷಧಿ ಕೇಂದ್ರಗಳಿಗೆ ಅನುಮತಿ ನೀಡಲಾಗಿರುತ್ತದೆ. ಅರ್ಜಿದಾರರು ಜನೌಷಧಿ ಕೇಂದ್ರಗಳ ಸ್ಥಾಪನೆಗೆ ಸಲ್ಲಿಸಿದ ಅರ್ಜಿಯನ್ನು ARS ಮುಂದೆ ಮಂಡಿಸಿ ಅದರ ಅನುಮೋದನೆಯ ನಂತರ ಆಯುಕ್ತರ ಮುಖಾಂತರ ಸರ್ಕಾರಕ್ಕೆ ಸಲ್ಲಿಸಿ, ಸರ್ಕಾರದಿಂದ ಅನುಮೋದನೆ ಆದ ನಂತರ ಅರ್ಜಿದಾರರಿಗೆ ಅನುಮತಿ ನೀಡಲಾಗುತ್ತದೆ. ಆದುದರಿಂದ, ಜನೌಷಧಿ ಕೇಂದ್ರಗಳನ್ನು ಪ್ರಾರಂಭಿಸುವ ನೀತಿಗೆ ಸಂಬಂಧಿಸಿದಂತೆ ಸಮಗ್ರವಾಗಿ ಪರಿಶೀಲಿಸುವ ಅಗತ್ಯವಿರುತ್ತದೆ.

ಪ್ರಸ್ತುತ ಜನೌಷಧಿ ಕೇಂದ್ರಗಳ ಸ್ಥಾಪನೆಗೆ 31 ಅರ್ಜಿಗಳು ಆಯುಕ್ತರ ಹಂತದಲ್ಲಿ ಬಾಕಿ ಇರುತ್ತವೆ. ಸದರಿ ಜನೌಷಧಿ ಕೇಂದ್ರಗಳ ಸ್ಥಾಪನೆಗೆ ಸಂಬಂಧಿಸಿದ ಈಗಿನ ನೀತಿಯು, ಕಾರ್ಯವಿಧಾನಕ್ಕೆ ಸಂಬಂಧಿಸಿದಂತೆ ಹಳೆಯದಾಗಿದೆ. ಈ ಹಿನ್ನೆಲೆಯಲ್ಲಿ ಪಾಲಿಸಿಯನ್ನು ಮರುಪರಿಶೀಲಿಸುವುದು ಅಗತ್ಯವಿರುತ್ತದೆ. ಆದುದರಿಂದ ಆಯುಕ್ತಾಲಯದಲ್ಲಿ ಸ್ವೀಕೃತವಾಗಿರುವ ಅರ್ಜಿಗಳ ಬಗ್ಗೆ ಕ್ರಮ ಕೈಗೊಳ್ಳುವ ಕುರಿತು ನಿರ್ದೇಶನ ಕೋರಿರುತ್ತಾರೆ.

ವಿಭಾಗ:– JD (M)
ಕ್ರಮ – ಸಾಧಾರಣ / ತುರ್ತು

19/5/25

Scanned with OKEN Scanner

ಪ್ರಸ್ತುತ ಆಸ್ಪತ್ರೆಗಳು ರೋಗಿಗಳಿಗೆ ಯಾವುದೇ ಔಷಧಿಗಳನ್ನು ಹೊರಗಿನಿಂದ ಖರೀದಿಸಲು ಶಿಫಾರಸ್ಸನ್ನು ಮಾಡದಂತೆ ನೋಡಿಕೊಳ್ಳುವುದು ಸರ್ಕಾರ ನೀತಿಯಾಗಿದೆ. ಈ ಹಿನ್ನೆಲೆಯಲ್ಲಿ ಆಸ್ಪತ್ರೆ ಆವರಣದೊಳಗೆ ಜನಔಷಧಿ ಕೇಂದ್ರಗಳನ್ನು ತೆರೆಯುವುದು ಸರ್ಕಾರದ ನೀತಿಗೆ ವ್ಯತಿರಿಕ್ತವಾಗುತ್ತದೆ.

ಭಾರತದ ಬಿ.ಪಿ.ಪಿ.ಐ ಬ್ಯೂರೋ ಆಫ್ ಫಾರ್ಮ ಈ ಜನೌಷಧಿ ಕೇಂದ್ರಗಳಿಗೆ ನೋಡಲ್ ಕೇಂದ್ರ ಸಂಸ್ಥೆಯಾಗಿದ್ದು, ಈ ಕೇಂದ್ರಗಳಿಂದ ಖರೀದಿಸುವ ಔಷಧಿಗಳಿಗೆ ವಿಶೇಷ ರಿಯಾಯಿತಿಯನ್ನು ಒದಗಿಸುತ್ತದೆ.

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಪ್ರಸ್ತಾವನೆ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 173 ಪಿಟಿಡಿ 2025, ಬೆಂಗಳೂರು,**
**ದಿನಾಂಕ: 14.05.2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರಿ ಆಸ್ಪತ್ರೆಗಳಲ್ಲಿ ಇನ್ನು ಮುಂದೆ ಜನೌಷಧಿ ಕೇಂದ್ರಗಳ ಹಂಚಿಕೆಯನ್ನು ಸ್ಥಗಿತಗೊಳಿಸಲು ಮತ್ತು ಅದಕ್ಕೆ ಅನುಗುಣವಾಗಿ ಜನೌಷಧಿ ಕೇಂದ್ರಗಳ ಪ್ರಾರಂಭಕ್ಕಾಗಿ ಆಯುಕ್ತಾಲಯದಲ್ಲಿ ಅನುಮೋದನೆಗಾಗಿ ಬಾಕಿ ಇರುವ 31 ಅರ್ಜಿಗಳನ್ನು ತಿರಸ್ಕರಿಸಲು ಅನುಮೋದನೆ ನೀಡಿ ಆದೇಶಿಸಿದೆ.

ಆದಾಗ್ಯೂ, ಸರ್ಕಾರಿ ಆಸ್ಪತ್ರೆಗಳ ಹೊರಗೆ ಜನೌಷಧಿ ಕೇಂದ್ರಗಳ ಸ್ಥಾಪನೆಯು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರದ ಕಾರಣ ಮುಂದುವರಿಯಬಹುದಾಗಿದೆ.

ಮುಂದುವರೆದು,ಪ್ರಸ್ತುತ ಇಲಾಖೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಅಸ್ತಿತ್ವದಲ್ಲಿರುವ ಜನೌಷದಿ ಕೇಂದ್ರಗಳನ್ನು ಅವರೊಂದಿಗೆ ಮಾಡಿಕೊಂಡಿರುವ ಒಪ್ಪಂದ ನಿಯಮಗಳ (MOU) ಪ್ರಕಾರ ಸ್ಥಗಿತಗೊಳಿಸಲು ಅಗತ್ಯ ಕ್ರಮವಹಿಸತಕ್ಕದ್ದು.

ಹಾಗೆಯೇ, ಜೆನೆರಿಕ್ ಔಷಧಿಗಳ ಖರೀದಿಗೆ ಬಿ.ಪಿ.ಪಿ.ಐ ಯೊಂದಿಗೆ ಕೆ.ಎಸ್.ಎಂ.ಎಸ್.ಸಿ.ಎಲ್ ರವರು ವಿಶೇಷ ದರಗಳನ್ನು ರೂಪಿಸಲು ಸೂಚಿಸಿದೆ. ಪರ್ಯಾಯವಾಗಿ, ಆಸ್ಪತ್ರೆಗಳು ಬಿ.ಪಿ.ಪಿ.ಐ (BPPI) ಯಿಂದ ಔಷಧಿಗಳನ್ನು ಖರೀದಿಸಿ ರೋಗಿಗಳಿಗೆ ಉಚಿತವಾಗಿ ವಿತರಿಸಲು ಕ್ರಮವಹಿಸಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

19/5
(ಶ್ರೀಪತಿ ಪಿ.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾವೈಪ ಮತ್ತು ಸಮನ್ವಯ)

**ಇವರಿಗೆ:-**

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದ ವೃತ್ತ, ಬೆಂಗಳೂರು.



Scanned with OKEN Scanner

2. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದ ವೃತ್ತ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸ್ಟೇಟ್ ಡ್ರಗ್ಸ್ ಅಂಡ್ ಲಾಜಿಸ್ಟಿಕ್ಸ್ ವೇರ್ ಹೌಸಿಂಗ್ ಸೊಸೈಟಿ, ನಂ.1, ಡಾ. ಸಿದ್ದಯ್ಯ ಪುರಾಣಿಕ್ ರಸ್ತೆ, ಕೆ.ಹೆಚ್.ಬಿ. ಕಾಲೋನಿ, ಮಾಗಡಿ ರಸ್ತೆ, ಬೆಂಗಳೂರು-79.
5. ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ, ಅರಮನೆ ರಸ್ತೆ, ಬೆಂಗಳೂರು.
6. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಮತ್ತು ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳು (ನಿರ್ದೇಶಕರ ಮುಖಾಂತರ).
7. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿ.

<u>ಪ್ರತಿ ಮಾಹಿತಿಗಾಗಿ:-</u>

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರ ಅಪರ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.



Scanned with OKEN Scanner